# ದಿನಾಂಕ: 13-07-2010ರಂದು ಪೂರ್ವಾಹ್ನ: 11-00ಗಂಟೆಗೆ ಹೇಮಾವತಿ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

## ಅಧ್ಯಕ್ಷತೆ: ಶ್ರೀ ಬಿ.ಆರ್. ನೀಲಪ್ಪ

## ಅಧ್ಯಕ್ಷರು,

## ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ

ಹಾಜರಿ: 07 ಗೈರು ಹಾಜರಿ: 00

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
| --- | --- | --- | --- |
| | | ಉಪ ಕಾರ್ಯದರ್ಶಿ(ಆಡಳಿತ) ಇವರು ಸಭೆಗೆ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು, ಉಪ ಕಾರ್ಯದರ್ಶಿ(ಅಭಿವೃದ್ಧಿ), ಮುಖ್ಯ ಲೆಕ್ಕಾಧಿಕಾರಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಯವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಮಾನ್ಯ ಸಮಿತಿ ಅಧ್ಯಕ್ಷರನ್ನು ಕೋರಿದರು. | |
| 1 | ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ವ್ಯಾಪ್ತಿಗೊಳಪಡುವ ಇಲಾಖೆಗಳ ಕ್ರಿಯಾ ಯೋಜನೆಗಳಿಗೆ ಅನುಮೋದನೆ ನೀಡುವ ಬಗ್ಗೆ | ಟಿಪ್ಪಣಿ ಸಂಖ್ಯೆ: ಜಿಪಂಹಾ/ಯೋವಿ(3)/ ಶಿಕ್ಷಣ ಮತ್ತು ಆರೋಗ್ಯ ಕ್ರಿ.ಯೋ-53-58/ /2010-11 ದಿನಾಂಕ: 02-06-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿಯವರು ಮಾತನಾಡುತ್ತಾ, 2010-11ನೇ ಸಾಲಿನಲ್ಲಿ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿಗೊಳಪಡುವ ವಿವಿಧ ಇಲಾಖೆಗಳ ಜಿಲ್ಲಾ ಪಂಚಾಯಿತಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, ವಿವಿಧ ಲೆಕ್ಕಶೀರ್ಷಿಕೆಗಳಡಿಯಲ್ಲಿ ಲಿಂಕ್ ಪುಸ್ತಕದಲ್ಲಿ ನಿಗಧಿಯಾದ ಅನುದಾನಕ್ಕೆ ತಕ್ಕಂತೆ ಕ್ರಿಯಾ ಯೋಜನೆಯನ್ನು ತಯಾರಿಸಿ ಜಿಲ್ಲಾ ಪಂಚಾಯಿತಿ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಸದರಿ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿಗೊಳಪಡುವ ಇಲಾಖೆಗಳ ಕ್ರಿಯಾ ಯೋಜನೆಗಳನ್ನು ಅನುಮೋದನೆಗಾಗಿ ಜಿಲ್ಲಾ ಪಂಚಾಯಿತಿ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಗೆ ಟಿಪ್ಪಣಿ ಮಂಡಿಸಿದೆ ಎಂದು ಸಭೆಗೆ ವಿವರ ನೀಡಿದರು. | ಸಭೆಯಲ್ಲಿ ಕ್ರಿಯಾ ಯೋಜನೆ ಗಳಿಗೆ ಅನುಮೋದನೆ ನೀಡುವ ವಿಷಯದ ಬಗ್ಗೆ ಸಮಗ್ರವಾಗಿ ಪರಿಶೀಲಿಸ ಲಾಯಿತು.<br>ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಪ್ರಸ್ತಾಪಿಸಿರುವ ವಿಷಯ ಗಳ ಬಗ್ಗೆ ಉಪ ನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿ ಕಾರಿಯವರು ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸ ಲಾಯಿತು. |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಶಂಕರ್ ರವರು ಮಾತನಾಡುತ್ತಾ, ಅನುದಾನಿತ ಶಾಲೆಗಳಿಗೆ ಬಿಸಿಯೂಟ ಸಿದ್ದಪಡಿಸಲು ಅಡುಗೆ ಕೋಣೆ ನಿರ್ಮಾಣಕ್ಕೆ ಅನುದಾನವನ್ನು ಬಿಡುಗಡೆ ಮಾಡಲು ಅವಕಾಶವಿದೆಯೇ? ಎಂಬ ಬಗ್ಗೆ ವಿವರಗಳನ್ನು ನೀಡುವಂತೆ ಕೋರಿದರು. ದಿನಾಂಕ: 01-06-2010ರಿಂದ ಬಿಸಿಯೂಟ ಕಾರ್ಯಕ್ರಮವನ್ನು ಎಲ್ಲಾ ಶಾಲೆಗಳಲ್ಲಿಯೂ ಪ್ರಾರಂಭ ಮಾಡಲಾಗಿದೆಯೇ? ಎಂಬ ಬಗ್ಗೆ ವಿವರಗಳನ್ನು ನೀಡಬೇಕೆಂದು ಕೋರಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಬಿಸಿಯೂಟ ಕಾರ್ಯಕ್ರಮವನ್ನು ಪ್ರಾರಂಭ ಮಾಡಿರುವ ಬಗ್ಗೆ ತಾಲ್ಲೂಕುವಾರು ಮಾಹಿತಿಯನ್ನು ಕ್ರೋಡೀಕರಿಸಿ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ನೀಡಲು ಕ್ರಮ ವಹಿಸಬೇಕೆಂದು ಶಿಕ್ಷಣಾಧಿಕಾರಿ, ಅಕ್ಷರ ದಾಸೋಹ ರವರಿಗೆ ತಿಳಿಸಿದರು.<br>ಪ್ರಸಕ್ತ ಸಾಲಿಗೆ ಪೀಠೋಪಕರಣ ಖರೀದಿಗೆ ನಿಗದಿಪಡಿಸಿರುವ ಅನುದಾನದಲ್ಲಿ ಆರ್.ಐ.ಡಿ.ಎಫ್ -12ರಲ್ಲಿ ಮಂಜೂರಾಗಿರುವ ಹೊಸ ಪ್ರೌಢಶಾಲಾ ಕಟ್ಟಡಗಳಿಗೆ ಪೀಠೋಪಕರಣಗಳನ್ನು ಖರೀದಿಸಿ ನೀಡಲು ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರಿಗೆ ತಿಳಿಸಲಾಯಿತು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎಸ್.ಪ್ರಕಾಶ್ ರವರು ಮಾತನಾಡುತ್ತಾ, ಗಬ್ಬಲಗೋಡು ಗ್ರಾಮದ ಪ್ರೌಢಶಾಲಾ ಕಟ್ಟಡ ಕಾಮಗಾರಿಯು ವಿಳಂಬವಾಗುತ್ತಿದೆ. ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಯು.ಕೆ.ಶಿವನಂಜಪ್ಪರವರು ಮಾತನಾಡುತ್ತಾ, ಹಾಸನ ತಾಲ್ಲೂಕು ಬೈಲಹಳ್ಳಿ ಮತ್ತು ದೊಡ್ಡಗದ್ದವಳ್ಳಿ ಗ್ರಾಮಗಳಲ್ಲಿ ಎಸ್.ಎಸ್.ಎ ವತಿಯಿಂದ ನಿರ್ಮಾಣ ಮಾಡಿರುವ ಕಟ್ಟಡಗಳು ಬಿದ್ದು ಹೋಗುವ ಸ್ಥಿತಿಯಲ್ಲಿವೆ. ಆದ್ದರಿಂದ, ಈ ಬಗ್ಗೆ ಸೂಕ್ತ ಪರಿಶೀಲನೆ ನಡೆಸಬೇಕೆಂದು ಕೋರಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ದೊಡ್ಡಗದ್ದವಳ್ಳಿ ಗ್ರಾಮದಲ್ಲಿ ಎಸ್.ಎಸ್.ಎ ವತಿಯಿಂದ ನಿರ್ಮಾಣ ಮಾಡಿರುವ ಕಾಮಗಾರಿಯ ಬಗ್ಗೆ ಹಾಸನ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಾಸನ ಇವರು ಜಂಟಿಯಾಗಿ ಪರಿಶೀಲನೆ ನಡೆಸಿ ವರದಿ ನೀಡಬೇಕೆಂದು ಸೂಚಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಶಂಕರ್ ರವರು ಮಾತನಾಡುತ್ತಾ, ವಯಸ್ಕರ ಶಿಕ್ಷಣ ಇಲಾಖೆಯ ವತಿಯಿಂದ ಗ್ರಾಮೀಣ ಪ್ರದೇಶಗಳಲ್ಲಿ ಮುಂದುವರಿಕೆ ಶಿಕ್ಷಣ ಕೇಂದ್ರಗಳಲ್ಲಿ ಕೆಲಸ ನಿರ್ವಹಿಸಿದವರಿಗೆ ವೇತನ ಪಾವತಿಸುವ ಬಗ್ಗೆ ಅನೇಕ ಬಾರಿ ಸಭೆಗಳಲ್ಲಿ ಪ್ರಸ್ತಾಪಿಸಿದ್ದರೂ ಸಹ ಇಲ್ಲಿಯವರೆಗೆ ವೇತನವನ್ನು | ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿಯ ವ್ಯಾಪ್ತಿಗೊಳ ಪಡುವ ಇಲಾಖೆ ಗಳ 2010-11ನೇ ಸಾಲಿನ ಜಿಲ್ಲಾ ಪಂಚಾಯಿತಿ ಕಾರ್ಯಕ್ರಮಗಳಿಗೆ ಸಂಬಂಧಿ ಸಿದಂತೆ, ವಿವಿಧ ಲೆಕ್ಕಶೀರ್ಷಿಕೆಗಳಡಿಯಲ್ಲಿ ಲಿಂಕ್ ಪುಸ್ತಕದಲ್ಲಿ ನಿಗಧಿಯಾದ ಅನುದಾನಕ್ಕೆ ತಕ್ಕಂತೆ ವಿವಿಧ ಇಲಾಖೆ ಯವರು ಸಿದ್ದಪಡಿಸಿ ಸಲ್ಲಿಸಿರುವ ಕ್ರಿಯಾ ಯೋಜನೆಗಳಿಗೆ ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು. |

ಪಾವತಿಸಿರುವುದಿಲ್ಲ. ಆದ್ದರಿಂದ, ಮುಂದುವರಿಕೆ ಶಿಕ್ಷಣ ಕೇಂದ್ರಗಳಲ್ಲಿ ಕೆಲಸ ನಿರ್ವಹಿಸಿದವರಿಗೆ ವೇತನ ಪಾವತಿಸುವ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.

ಮುಂದುವರೆದು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ 24 X 7 ಆಸ್ಪತ್ರೆಗಳಿಗೆ ಕಡ್ಡಾಯವಾಗಿ 2-3 ನರ್ಸ್ ಗಳನ್ನು ನೇಮಕ ಮಾಡಬೇಕೆಂದು ಕೋರಿದರು ಮತ್ತು ಕೇರಳಾಪುರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಎಕ್ಸರೇ ಯಂತ್ರವನ್ನು ಅಳವಡಿಸದೇ ಇರುವ ಬಗ್ಗೆ ಆಕ್ಷೇಪವನ್ನು ವ್ಯಕ್ತಪಡಿಸಿದರು.

ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಕೇರಳಾಪುರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಇನ್ನು 10 ದಿನಗಳ ಒಳಗಾಗಿ ಎಕ್ಸರೇ ಯಂತ್ರವನ್ನು ಅಳವಡಿಸಲು ಮತ್ತು ಅಗತ್ಯ ಸಿಬ್ಬಂದಿಯವರನ್ನು ನೇಮಕ ಮಾಡಲು ಕ್ರಮ ವಹಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರಿಗೆ ಸೂಚಿಸಿದರು.

ಮಾನ್ಯ ಸದಸ್ಯರಾದ ಶ್ರೀ ಸಿ.ಎಸ್.ಪ್ರಕಾಶ್ ರವರು ಮಾತನಾಡುತ್ತಾ, ಯಗಚಿ ಜಲಾಶಯದಿಂದ ಅರಸೀಕೆರೆ ತಾಲ್ಲೂಕಿನ ಗ್ರಾಮಗಳಿಗೆ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲು ಅನುಷ್ಠಾನ ಮಾಡುತ್ತಿರುವ ಕಾಮಗಾರಿಯು ಯಾವ ಹಂತದಲ್ಲಿದೆ ಎಂಬ ಬಗ್ಗೆ ವಿವರ ನೀಡುವಂತೆ ಮತ್ತು ಹಳೇಬೀಡು ಹೋಬಳಿಯ 12 ಗ್ರಾಮಗಳನ್ನು ಸೇರಿಸಲಾಗಿದೆಯೇ ಎಂಬ ಬಗ್ಗೆ ವಿವರಗಳನ್ನು ನೀಡುವಂತೆ ಕೋರಿದರು.

ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ ಇವರು ಉತ್ತರಿಸುತ್ತಾ, ಜಾಕ್ ವೆಲ್ ಕಾಮಗಾರಿಯು ನಡೆಯುತ್ತಿದ್ದು, ಹಳೇಬೀಡು ಹೋಬಳಿಯ 12 ಗ್ರಾಮಗಳನ್ನು ಈ ಯೋಜನೆಯಲ್ಲಿ ಸೇರಿಸಲಾಗಿದೆ ಎಂದು ವಿವರ ನೀಡಿದರು.

ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಜಲಮಣಿ ಯೋಜನೆಯನ್ನು ಅನುಷ್ಠಾನ ಮಾಡಿರುವ ಬಗ್ಗೆ ವಿವರಗಳನ್ನು ಒದಗಿಸುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ಸೂಚಿಸಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಲಮಣಿ ಯೋಜನೆಯಡಿಯಲ್ಲಿ 457 ಶಾಲೆಗಳಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಬೇಕಾಗಿರುತ್ತದೆ. ಆದ್ದರಿಂದ, ಕ್ಷೇತ್ರ ಶಿಕ್ಷಣಾಧಿಕಾರಿಯವರು ಈಗಾಗಲೇ ಎಷ್ಟು ಶಾಲೆಗಳಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲಾಗಿದೆ ಮತ್ತು ಇನ್ನೂ ಎಷ್ಟು ಶಾಲೆಗಳಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಬೇಕೆಂಬ ಬಗ್ಗೆ ವಿವರಗಳನ್ನು

| | | | |
|---|---|---|---|
| | | ದಿನಾಂಕ: 20-07-2010ರ ಒಳಗಾಗಿ ನೀಡಲು ಕ್ರಮ ವಹಿಸತಕ್ಕದ್ದು. ವಿವರಗಳನ್ನು ನೀಡಿದ ನಂತರ 10 ದಿನಗಳ ಒಳಗಾಗಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಶಾಲೆಗಳಲ್ಲಿ ಅಳವಡಿಸಲು ಕ್ರಮ ವಹಿಸತಕ್ಕದ್ದು. ಅಲ್ಲದೆ, ಪ್ರತಿ ಘಟಕ ಅಳವಡಿಕೆಗೆ ರೂ.1000.00 ದಿಂದ ರೂ.5000.00ದವರೆಗೆ ವಿನಿಯೋಗಿಸಲು ಅವಕಾಶವಿರುತ್ತದೆ. ಆದ್ದರಿಂದ, ಏಜನ್ಸಿಯವರನ್ನು ನೇಮಕ ಮಾಡಿ ಅವರು ಶಾಲೆಗಳಿಗೆ ಭೇಟಿ ನೀಡಿ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲು ಎಲ್ಲಾ ರೀತಿಯ ಕ್ರಮ ವಹಿಸಬೇಕೆಂದು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಿದರು ಹಾಗೂ ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಯವರು ಸಹ ಸಹಕರಿಸುವಂತೆ ತಿಳಿಸಿದರು. ದಿನಾಂಕ: 31-07-2010ರ ಒಳಗಾಗಿ ಪ್ರತಿ ಶಾಲೆಯಲ್ಲಿಯೂ ಸಹ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಿ ವಿದ್ಯಾರ್ಥಿಗಳು ನೀರನ್ನು ಕುಡಿಯುತ್ತಿರುವ ಒಂದು ಭಾವಚಿತ್ರವನ್ನು ತೆಗೆದು ಕಳುಹಿಸಬೇಕೆಂದು ಸೂಚಿಸಿದರು.<br>ಮುಂದುವರೆದು, ಅಂಗನವಾಡಿ ಕೇಂದ್ರಗಳಿಗೂ ಸಹ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸುವುದು ಅಗತ್ಯವಿದ್ದು, ಈ ಬಗ್ಗೆಯೂ ಸಹ ಪರಿಶೀಲಿಸಬೇಕೆಂದು ಕಾರ್ಯಪಾಲಕ ಅಭಿಯಂತರರು, ಪಂ.ರಾ.ಇಂ. ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಿದರು.<br>ಕಾರ್ಯಪಾಲಕ ಅಭಿಯಂತರರು, ಪಂ.ರಾ.ಇಂ. ವಿಭಾಗ, ಹಾಸನ ಇವರು ಉತ್ತರಿಸುತ್ತಾ, ಜಲಮಣಿ ಯೋಜನೆಯಡಿ ಯುರೇಕಾಫೋರ್ಬ್ಸ್ ರವರು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಶಾಲೆಗಳಿಗೆ ಅಳವಡಿಸಲು ನೇಮಕ ಮಾಡಬಹುದಾಗಿರುತ್ತದೆ ಮತ್ತು ಕರ್ನಾಟಕ ಗ್ರಾಮೀಣ ನೀರು ಮತ್ತು ಒಳಚರಂಡಿ ಮಂಡಳಿ ರಚನೆಯಾಗಿದ್ದು, ಅಂಗನವಾಡಿ ಕೇಂದ್ರಗಳಿಗೂ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಬಹುದಾಗಿರುತ್ತದೆ ಎಂದು ವಿವರ ನೀಡಿದರು.<br>ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲು ದಿನಾಂಕಗಳನ್ನು ನಿಗದಿಪಡಿಸಿ ಏಜನ್ಸಿಯವರಿಗೆ ವಾಹನ ಸೌಲಭ್ಯವನ್ನು ಕಲ್ಪಿಸಲು ಕ್ರಮ ವಹಿಸುವಂತೆ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರಿಗೆ ಸೂಚಿಸಿದರು. | |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಶಂಕರ್ ರವರು ಮಾತನಾಡುತ್ತಾ, ಪ್ರೌಢಶಾಲೆಗಳಲ್ಲಿ ಗಣಕ ಯಂತ್ರಗಳು ಮತ್ತು ಗ್ಯಾಸ್ ಸಿಲಿಂಡರ್ ಗಳು ಇದ್ದು, ರಾತ್ರಿ ವೇಳೆಯಲ್ಲಿ ಶಾಲೆಗಳಲ್ಲಿ ರಾತ್ರಿ ಕಾವಲುಗಾರರು ಇಲ್ಲದೆ ಇರುವುದರಿಂದ, ಕಳ್ಳತನ ಹೆಚ್ಚಾಗುತ್ತಿದೆ. ಆದ್ದರಿಂದ, ರಾತ್ರಿ ಕಾವಲುಗಾರರನ್ನು ನೇಮಕ ಮಾಡಿಕೊಳ್ಳಬೇಕೆಂದು ಕೋರಿದರು. ಎಸ್.ಎಸ್.ಎಲ್.ಸಿ ಫಲಿತಾಂಶ ಕಡಿಮೆಯಾಗಿರುವ ಸರ್ಕಾರಿ ಶಾಲೆಗಳ ಮೇಲೆ ಯಾವ ಕ್ರಮ ವಹಿಸಲಾಗಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು ಮತ್ತು ಖಾಸಗಿ ಅನುದಾನಿತ ಶಾಲೆಗಳ ಆಡಳಿತ ಮಂಡಳಿಯಲ್ಲಿ ಯಾವ ಯಾವ ವರ್ಗದ ಸದಸ್ಯರು ಅಥವಾ ನಿರ್ದೇಶಕರುಗಳು ಇರಬೇಕು ಎಂಬ ಬಗ್ಗೆ ವಿವರಗಳನ್ನು ನೀಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಪ್ರೌಢಶಾಲೆಗಳಿಗೆ ರಾತ್ರಿ ಕಾವಲುಗಾರರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಬಗ್ಗೆ ಕ್ರಮ ವಹಿಸುವಂತೆ ಮತ್ತು ಖಾಸಗಿ ಅನುದಾನಿತ ಶಾಲೆಗೆ ಆಡಳಿತ ಮಂಡಳಿಯಲ್ಲಿ ಯಾವ ಯಾವ ವರ್ಗದ ಸದಸ್ಯರು ಮತ್ತು ನಿರ್ದೇಶಕರು ಇರಬೇಕು ಎನ್ನುವ ಬಗ್ಗೆ ಮಾಹಿತಿಯನ್ನು ಕ್ರೋಡೀಕರಿಸಿ ಮಾನ್ಯ ಸದಸ್ಯರಿಗೆ ನೀಡಲು ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರಿಗೆ ತಿಳಿಸಿದರು.<br>ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಮಾಜಿಕ ಅರಣ್ಯ ವಿಭಾಗ, ಹಾಸನ ಇವರು ಮಾತನಾಡುತ್ತಾ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಸರ್ಕಾರಿ ಶಾಲೆಗಳಿಗೆ ಹೂವಿನ ಗಿಡ, ಹಣ್ಣಿನ ಸಸಿ ಮತ್ತು ಇತರೆ ಸಸಿಗಳನ್ನು ನೆಡಲು ಅವಕಾಶವಿದ್ದು, ಇದಕ್ಕಾಗಿ ಅವಶ್ಯವಿರುವ ತಡೆಗೋಡೆ ನಿರ್ಮಾಣ/ ಜಮೀನು ಸಮತಟ್ಟು ಮಾಡುವುದಕ್ಕಾಗಿ ಕ್ಷೇತ್ರ ಶಿಕ್ಷಣಾಧಿಕಾರಿಯವರು ಶಾಲೆಗಳಿಂದ ಪ್ರಸ್ತಾವನೆಯನ್ನು ಪಡೆದು, ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಲ್ಲಿ ಕ್ರಿಯಾ ಯೋಜನೆಯಡಿ ಕಾಮಗಾರಿಗಳನ್ನು ಸೇರಿಸಲು ಕ್ರಮ ವಹಿಸಬೇಕಾಗಿರುತ್ತದೆ ಎಂದು ತಿಳಿಸಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಈ ಹಿಂದೆ ಸುವರ್ಣ ಜಲ ಯೋಜನೆಯಡಿ ನಿರ್ಮಿತಿ ಕೇಂದ್ರದ ವತಿಯಿಂದ ಶಾಲೆಗಳಲ್ಲಿ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡಿದ್ದು, ಸದರಿ ಯೋಜನೆಗಳನ್ನು ಪೂರ್ಣಗೊಳಿಸಿರುವುದಿಲ್ಲ. ಈ ಯೋಜನೆಯಡಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕಾರ್ಯನಿರ್ವಾಹಕ ಅಧಿಕಾರಿಯವರ ಖಾತೆಯಲ್ಲಿ ಸುಮಾರು ರೂ.50.00ರಿಂದ 60ಲಕ್ಷಗಳವರೆಗೆ ಅನುದಾನ ಹಾಲಿ | |

ಲಭ್ಯವಿರುತ್ತದೆ. ಆದ್ದರಿಂದ ಸದರಿ ಅನುದಾನದಲ್ಲಿ ಬೈಫ್ ಸಂಸ್ಥೆಯವರು ಮಳೆನೀರು ಕೊಯ್ಲು ಕಾಮಗಾರಿಯನ್ನು ಅನುಷ್ಟಾನ ಮಾಡಿರುವ ರೀತಿಯಲ್ಲಿ ಶಾಲೆಗಳಿಗೆ ಸುವರ್ಣಜಲ ಯೋಜನೆಗಳನ್ನು ಬೈಫ್ ಸಂಸ್ಥೆಯಿಂದ ತಾಂತ್ರಿಕ ಸಲಹೆಯನ್ನು ಪಡೆದು ಸರ್ವ ಶಿಕ್ಷ ಅಭಿಯಾನದಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಇಂಜಿನಿಯರ್ ರವರಿಂದ ಅನುಷ್ಟಾನ ಮಾಡಲು ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತು ಕಾರ್ಯನಿರ್ವಾಹಕ ಅಧಿಕಾರಿಯವರು ಕ್ರಮ ವಹಿಸಬೇಕೆಂದು ತಿಳಿಸಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲಾ ಆಯುಷ್ ಇಲಾಖೆಯ ವತಿಯಿಂದ ಆಯುರ್ವೇದ ಗಿಡ ಮೂಲಿಕೆಗಳನ್ನು ಸಾಮಾಜಿಕ ಅರಣ್ಯ ವಿಭಾಗದ ಚಿಕ್ಕ ಕಡಲೂರು ನರ್ಸರಿ, ಹೊಳೆನರಸೀಪುರ ತಾ: ಹರಿಹರಪುರದ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಅರಕಲಗೂಡು ತಾಲ್ಲೂಕು ರಾಗಿಮರೂರು ವರನಂದಿ ಶಾಲೆ ಆವರಣದಲ್ಲಿರುವ ಜಮೀನಿನಲ್ಲಿ ಬೆಳೆಸಲು ಅಗತ್ಯ ಕ್ರಮ ವಹಿಸಬೇಕೆಂದು ಜಿಲ್ಲಾ ಆಯುಷ್ ಅಧಿಕಾರಿಯವರಿಗೆ ತಿಳಿಸಿದರು.

ಮುಂದುವರೆದು, ಪ್ರಸಕ್ತ ಸಾಲಿನಲ್ಲಿ ನನ್ನ ಕನಸಿನ ಗ್ರಾಮಾಭಿವೃದ್ಧಿ ಹೆಸರಿನಲ್ಲಿ ಗ್ರಾಮ ಪಂಚಾಯಿತಿಗಳ ಸಮಗ್ರ ಅಭಿವೃದ್ಧಿ ಪಡಿಸಲು ಜಿಲ್ಲೆಯಲ್ಲಿ ಪ್ರತಿ ಜಿಲ್ಲಾ ಪಂಚಾಯಿತಿ ಸದಸ್ಯರ ವ್ಯಾಪ್ತಿಗೆ ಒಂದು ಗ್ರಾಮ ಪಂಚಾಯಿತಿ ಬರುವಂತೆ ಒಟ್ಟು ಎಲ್ಲಾ ತಾಲ್ಲೂಕುಗಳಿಂದ 50 ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಲಾಗಿದ್ದು, ಸದರಿ ಗ್ರಾಮ ಪಂಚಾಯಿತಿಗಳಲ್ಲಿ ಸರ್ಕಾರದಿಂದ ಮಂಜೂರಾಗುವ ಯೋಜನೆಗಳನ್ನು ಪರಿಣಾಮಕಾರಿ ಯಾಗಿ ಅನುಷ್ಟಾನ ಮಾಡಲು ಜಿಲ್ಲಾ ಮಟ್ಟದ ಮತ್ತು ತಾಲ್ಲೂಕು ಮಟ್ಟದ ಒಬ್ಬೊಬ್ಬ ಅಧಿಕಾರಿಯವರಿಗೆ ತಲಾ ಒಂದು ಗ್ರಾಮ ಪಂಚಾಯಿತಿಯನ್ನು ದತ್ತು ಕೊಡಲಾಗುವುದು. ಅಲ್ಲದೆ, ಈ ಕಾರ್ಯಕ್ರಮದ ಯಶಸ್ವಿಗೆ ಸ್ಥಳೀಯ ಜನ ಪ್ರತಿನಿಧಿಗಳು, ಸರ್ಕಾರೇತರ ಸಂಸ್ಥೆಯವರು, ಕಂದಾಯ ಇಲಾಖೆಯ ಅಧಿಕಾರಿಗಳು ಮತ್ತು ಗ್ರಾಮಗಳಲ್ಲಿರುವ ಪ್ರಭಾವಿ ವ್ಯಕ್ತಿಗಳ ಸಹಕಾರದೊಂದಿಗೆ ಜನರಿಗೆ ತಿಳುವಳಿಕೆಯನ್ನು ನೀಡಿ ಯೋಜನೆಗಳನ್ನು ಅತ್ಯಂತ ಪರಿಣಾಮಕಾರಿಯಾಗಿ ಅನುಷ್ಟಾನ ಮಾಡಲು ಉದ್ದೇಶಿಸಲಾಗಿದೆ. ಅಲ್ಲದೆ, ತಾಲ್ಲೂಕು ಮಟ್ಟದಲ್ಲಿ ವಿಡಿಯೋ ಕಾನ್ಫರೆನ್ಸ್ ಅನ್ನು ಬಿ.ಎಸ್.ಎನ್.ಎಲ್ ವತಿಯಿಂದ ಅಳವಡಿಸುತ್ತಿದ್ದು, ಜಿಲ್ಲಾ ಮಟ್ಟದಿಂದಲೇ ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿಗಳಲ್ಲಿ ಅನುಷ್ಟಾನ ಮಾಡುತ್ತಿರುವ ಯೋಜನೆಗಳ ಪರಿಶೀಲನೆ ಮಾಡಬಹುದಾಗಿದೆ. ಆದ್ದರಿಂದ, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ತಮ್ಮ ಸಹಕಾರವನ್ನು ನೀಡಬೇಕೆಂದು ಕೋರಿದರು.

| | | | |
|---|---|---|---|
| 2 | ಸರ್ಕಾರಿ ಪದವಿಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಬೇಲೂರು ಇಲ್ಲಿನ ಶಿಥಿಲವಾಗಿರುವ ಕೊಠಡಿಗಳನ್ನು ನೆಲಸಮಗೊಳಿಸಿ ಹೊಸ ಕೊಠಡಿಗಳನ್ನು ನಿರ್ಮಿಸುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಭಿ(6) ಕಟ್ಟಡ-5/2010-11 ದಿನಾಂಕ: 23-06-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಬೇಲೂರು ಸರ್ಕಾರಿ ಬಾಲಕರ ಪದವಿಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) 1947ರಲ್ಲಿ ಪ್ರಾರಂಭವಾಗಿದ್ದು, ಪ್ರೌಢಶಾಲೆಗೆ ಸಂಬಂಧಪಟ್ಟ 10 ಕೊಠಡಿಗಳು 62 ವರ್ಷದಷ್ಟು ಹಳೆಯದಾಗಿದ್ದು, ಕೊಠಡಿಗಳು ಶಿಥಿಲಗೊಂಡಿದ್ದು, ದುರಸ್ತಿಪಡಿಸಲಾಗದಂತಹ ಸ್ಥಿತಿಗೆ ತಲುಪಿದ್ದು, ಮಳೆಗಾಲದಲ್ಲಿ ಸದರಿ ಕೊಠಡಿಗಳಲ್ಲಿ ವಿದ್ಯಾರ್ಥಿಗಳನ್ನು ಕೂರಿಸಿ ಪಾಠಪ್ರವಚನ ಮಾಡಲು ಕಷ್ಟಕರವಾಗಿದ್ದು, ಯಾವುದೇ ಗಳಿಗೆಯಲ್ಲಾದರೂ ಬೀಳುವ ಸ್ಥಿತಿಯಲ್ಲಿರುವುದರಿಂದ, ಶಿಥಿಲಗೊಂಡಿರುವ ಕೊಠಡಿಗಳನ್ನು ನೆಲಸಮಗೊಳಿಸಿ ಹೊಸ ಕೊಠಡಿಗಳನ್ನು ನಿರ್ಮಾಣ ಮಾಡಬೇಕೆಂದು ಉಪ ಪ್ರಾಂಶುಪಾಲರು (ಪ್ರೌಢಶಾಲಾ ವಿಭಾಗ) ಸರ್ಕಾರಿ ಪದವಿಪೂರ್ವ ಕಾಲೇಜು ಬೇಲೂರು ಇವರು ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಿಗೆ ಮನವಿ ಸಲ್ಲಿಸಿರುತ್ತಾರೆ. ಮಾನ್ಯ ಜಿಲ್ಲಾ ಪಂಚಾಯತ್ ಅಧ್ಯಕ್ಷರು ಸದರಿ ವಿಷಯವನ್ನು ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಗೆ ಮಂಡಿಸಲು ಸೂಚಿಸಿರುತ್ತಾರೆ.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಬೇಲೂರು ಸರ್ಕಾರಿ ಬಾಲಕರ ಪದವಿಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ)ದ ಕೊಠಡಿಗಳು ಶಿಥಿಲಗೊಂಡಿದ್ದು, ಕೊಠಡಿಗಳನ್ನು ನೆಲಸಮಗೊಳಿಸುವ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಯವರು ತಮ್ಮ ಅಭಿಪ್ರಾಯವನ್ನು ತಿಳಿಸಬೇಕೆಂದು ಸೂಚಿಸಿದರು.<br>ಕ್ಷೇತ್ರ ಶಿಕ್ಷಣಾಧಿಕಾರಿಯವರು ಉತ್ತರಿಸುತ್ತಾ, ಬೇಲೂರು ಸರ್ಕಾರಿ ಬಾಲಕರ ಪದವಿಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ)ದ ಕೊಠಡಿಗಳು ಶಿಥಿಲವಾಗಿದ್ದು, ದೊಡ್ಡ ಪ್ರಮಾಣದ ದುರಸ್ಥಿಯ ಅಗತ್ಯವಿರುವುದಾಗಿ ಸಭೆಗೆ ವಿವರ ನೀಡಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಬೇಲೂರು ಸರ್ಕಾರಿ ಬಾಲಕರ ಪದವಿಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಕಟ್ಟಡಕ್ಕೆ ದುರಸ್ಥಿ ಮಾಡಲು ಎಷ್ಟು ಅನುದಾನದ ಅವಶ್ಯಕತೆ ಇದೆ ಎಂಬ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬೇಲೂರು ಇವರು ಸ್ಥಳ ತನಿಖೆ ನಡೆಸಿ ಅಂದಾಜು ಪಟ್ಟಿಯನ್ನು ಸಿದ್ದಪಡಿಸಿ ಸಲ್ಲಿಸುವಂತೆ ತಿಳಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 3 | ಪಂಚಕರ್ಮ ವಿಭಾಗ, ಆರಂಭಿಸುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆಡಳಿತ(4)42- ಆರೋಗ್ಯ/2010-11 ದಿನಾಂಕ: 02-07-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ, ತೆರಣ್ಯ, ಹೊಳೆನರಸೀಪುರ ತಾಲ್ಲೂಕು ಇಲ್ಲಿಗೆ ಪಂಚಕರ್ಮ ವಿಭಾಗವನ್ನು ಪ್ರಾರಂಭಿಸಲು ಅವಶ್ಯಕವಿರುವ ಸಾಮಗ್ರಿಗಳನ್ನು ಕೊಟೇಷನ್ ಆಧಾರದಲ್ಲಿ ಖರೀದಿಸಲು ಅನುಮತಿ ನೀಡುವಂತೆ ಕೋರಿ ಜಿಲ್ಲಾ ಆಯುಷ್ ಅಧಿಕಾರಿಗಳು, ಹಾಸನ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಪರಿಶೀಲಿಸಲಾಯಿತು.<br>ಜಿಲ್ಲಾ ಆಯುಷ್ ಅಧಿಕಾರಿಗಳು, ಹಾಸನ ಇವರು ಕೋರಿರುವಂತೆ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ, ತೆರಣ್ಯ, ಹೊಳೆನರಸೀಪುರ ತಾಲ್ಲೂಕು ಇಲ್ಲಿಗೆ ಪಂಚಕರ್ಮ ವಿಭಾಗವನ್ನು ಪ್ರಾರಂಭಿಸಲು |

| | | | |
|---|---|---|---|
| | | | ಅವಶ್ಯಕವಿರುವ ಸಾಮಗ್ರಿಗಳನ್ನು ಕೊಟೇಷನ್ ಆಧಾರದಲ್ಲಿ ನಿಯಮಾನುಸಾರ ಖರೀದಿಸಲು ಸಭೆಯು ಸರ್ವಾನುಮತದಿಂದ ಅನುಮತಿ ನೀಡಿತು. |
| 4 | ಅರಸೀಕೆರೆ ತಾಲ್ಲೂಕು ಜಾವಗಲ್ಲಿನಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಕಟ್ಟಡದಲ್ಲಿ ಶಾಲಾ ಕೊಠಡಿಗಳನ್ನು ಪೊಲೀಸ್ ಠಾಣೆಯ ಉಪಯೋಗಕ್ಕಾಗಿ ಬಿಟ್ಟುಕೊಡುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆ(5) ಶಿಕ್ಷಣ-09/2010-11 ದಿನಾಂಕ: 29-04-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಅರಸೀಕೆರೆ ತಾ: ಜಾವಗಲ್ಲಿನಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಕಟ್ಟಡದಲ್ಲಿ ನಾಲ್ಕು ಶಾಲಾ ಕೊಠಡಿಗಳನ್ನು ಜಾವಗಲ್ಲಿನಲ್ಲಿ ಉನ್ನತೀಕರಿಸಿದ ಪೊಲೀಸ್ ಠಾಣೆಯ ಉಪಯೋಗಕ್ಕಾಗಿ ಬಿಟ್ಟು ಕೊಡಲು ಪೊಲೀಸ್ ಅಧೀಕ್ಷಕರು ದಿನಾಂಕ: 08-4-2010ರ ಪತ್ರದಲ್ಲಿ ಕೋರಿರುವುದಾಗಿ ಇವರ ಮನವಿ ಅನುಸಾರ ಎರಡು ವರ್ಷಗಳಿಗೆ ಸೀಮಿತಗೊಳಿಸಿ, ನಾಲ್ಕು ಕೊಠಡಿಗಳನ್ನು ಬಿಟ್ಟುಕೊಡುವ ಬಗ್ಗೆ ಆದೇಶ ಕೋರಿ ಉಲ್ಲೇಖಿತ ಪತ್ರದಲ್ಲಿ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಕೋರಿರುವಂತೆ ಅರಸೀಕೆರೆ ತಾ: ಜಾವಗಲ್ಲಿನಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಕಟ್ಟಡದಲ್ಲಿ ನಾಲ್ಕು ಶಾಲಾ ಕೊಠಡಿಗಳನ್ನು 2 ವರ್ಷಗಳಿಗೆ ಸೀಮಿತಗೊಳಿಸಿ ಜಾವಗಲ್ಲಿನಲ್ಲಿ ಉನ್ನತೀಕರಿಸಿದ ಪೊಲೀಸ್ ಠಾಣೆಯ ಉಪಯೋಗಕ್ಕಾಗಿ ಬಿಟ್ಟು ಕೊಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | | |
| 1 | ಹನುಮಂತಪುರ ಸಂಯುಕ್ತ ಪ್ರೌಢಶಾಲೆ ಮತ್ತು ಗವೇನಹಳ್ಳಿ ಪ್ರಾಥಮಿಕ ಶಾಲಾ ಕಟ್ಟಡವನ್ನು ನೆಲಸಮಗೊಳಿಸುವ ಬಗ್ಗೆ | ಮಾನ್ಯ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ಹನುಮಂತಪುರ ಸಂಯುಕ್ತ ಪ್ರೌಢಶಾಲೆ ಕಟ್ಟಡ ಮತ್ತು ಗವೇನಹಳ್ಳಿ ಪ್ರಾಥಮಿಕ ಶಾಲಾ ಕಟ್ಟಡಗಳು ತುಂಬಾ ಶಿಥಿಲವಾಗಿದ್ದು, ಶಾಲೆಯನ್ನು ನಡೆಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ, ಸದರಿ ಶಾಲಾ ಕಟ್ಟಡವನ್ನು ನೆಲಸಮಗೊಳಿಸಲು ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಹನುಮಂತಪುರ ಸಂಯುಕ್ತ ಪ್ರೌಢಶಾಲೆ ಕಟ್ಟಡ ಮತ್ತು ಗವೇನಹಳ್ಳಿ ಪ್ರಾಥಮಿಕ ಶಾಲಾ ಕಟ್ಟಡಗಳನ್ನು ನೆಲಸಮಗೊಳಿಸುವ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತು ಸಹಾಯಕ ಕಾರ್ಯ ಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಾಸನ ಇವರು ಶಾಲಾ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಹನುಮಂತಪುರ ಸಂಯುಕ್ತ ಪ್ರೌಢಶಾಲೆ ಕಟ್ಟಡ ಮತ್ತು ಗವೇನಹಳ್ಳಿ ಪ್ರಾಥಮಿಕ ಶಾಲಾ ಕಟ್ಟಡಗಳನ್ನು ನೆಲಸಮಗೊಳಿಸುವ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತು ಸಹಾಯಕ ಕಾರ್ಯ |

| | | |
|---|---|---|
| | ಕೊಳೆಯಾದ ವಿವಿಧ ಬಟ್ಟೆಗಳನ್ನು ತೊಳೆಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಹಾಸನ ಇವರು ಟರಪಟ್ಟಿ ಕರೆದು ತುಲನಾತ್ಮಕ ದರಪಟ್ಟಿಯೊಂದಿಗೆ ಪ್ರಸ್ತಾವನೆ ಸಲ್ಲಿಸಿ, ದರಪಟ್ಟಿ ಸಲ್ಲಿಸಿದ 3 ಸಂಸ್ಥೆಗಳ ಪೈಕಿ ಹೆಚ್.ವಿ. ಅನ್ನಪೂರ್ಣೇಶ್ವರಿ ಬಿನ್ ಹೆಚ್.ಡಿ ವೆಂಕಟೇಶ್, ಕುಂಬಾರ ಬೀದಿ, ಹಾಸನ ಇವರು ಸೂಚಿಸಿದ ದರವು ಕಡಿಮೆ ಇರುವ ಕಾರಣ, ಇವರಿಂದ, ಕುಟುಂಬ ಕಲ್ಯಾಣ ಶಸ್ತ್ರ ಚಿಕಿತ್ಸೆಗೆ ಬಳಸಿದ ಬಟ್ಟೆಗಳನ್ನು ಒಗೆಸಲು ಅನುಮತಿ ಕೋರಿರುತ್ತಾರೆ ಹಾಗೂ ವೆಚ್ಚವನ್ನು 2211-00-001-0-02 ಯೋಜನೆಯಡಿಯಲ್ಲಿ ಭರಿಸುವುದಾಗಿಯೂ ಈ ಕಾರ್ಯಕ್ಕೆ ವಾರ್ಷಿಕವಾಗಿ ಅಂದಾಜು ರೂ.50,000/-ಗಳ ವೆಚ್ಚ ತಗಲುವುದೆಂದು ತಿಳಿಸಿರುತ್ತಾರೆ | ಕೋರಿರುವಂತೆ ಕುಟುಂಬ ಕಲ್ಯಾಣ ಬ್ಯೂರೋ ವಿಭಾಗದಿಂದ ಕುಟುಂಬ ಕಲ್ಯಾಣ ಶಸ್ತ್ರ ಚಿಕಿತ್ಸೆ ಗಳನ್ನು ಮಾಡಲು ಬಳಸಿದ ಕೊಳೆಯಾದ ವಿವಿಧ ಬಟ್ಟೆಗಳನ್ನು ದರಪಟ್ಟಿಯಲ್ಲಿ ಕಡಿಮೆ ದರ ಸೂಚಿಸಿರುವ ಹೆಚ್.ವಿ. ಅನ್ನಪೂರ್ಣೇಶ್ವರಿ ಬಿನ್ ಹೆಚ್.ಡಿ ವೆಂಕಟೇಶ್, ಕುಂಬಾರ ಬೀದಿ, ಹಾಸನ ಇವರಿಂದ ತೊಳೆಸಲು ಮತ್ತು ಈ ಕಾರ್ಯಕ್ಕೆ ವಾರ್ಷಿಕವಾಗಿ ಅಂದಾಜು ರೂ.50000/-(ರೂಪಾಯಿ ಐವತ್ತು ಸಾವಿರ ಮಾತ್ರ)ಗಳನ್ನು ಲೆಕ್ಕಶೀರ್ಷಿಕೆ 2211-00-001-0-02 ಯೋಜನೆಯಡಿಯಲ್ಲಿ ಭರಿಸಲು ಸಭೆಯು ಸರ್ವಾನುಮತದಿಂದ ಅನುಮತಿ ನೀಡಿತು. |
| | ವಂದನೆಗಳೊಂದಿಗೆ ಸಭೆಯಲ್ಲಿ ಮುಕ್ತಾಯಗೊಳಿಸಲಾಯಿತು. | |

ಬಿ.ಆರ್. ನೀಲಪ್ಪ
(ಬಿ.ಆರ್.ನೀಲಪ್ಪ)
ಅಧ್ಯಕ್ಷರು
ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ
ಜಿಲ್ಲಾ ಪಂಚಾಯಿತಿ, ಹಾಸನ.

-10